## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಮದುರ್ಗ ತಾಲ್ಲೂಕಿನ ಹಂಪಿಹೊಳಿ ಗ್ರಾಮದಲ್ಲಿ ಮಲಪ್ರಭಾ ನದಿಗೆ ತಡೆಗೋಡೆ ನಿರ್ಮಾಣ ಕಾಮಗಾರಿಯ ರೂ.126.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

***

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ಎಂಪಿಜಡ್/50/2019-20/5376 ದಿನಾಂಕ 27.12.2019.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ಎಂಪಿಜಡ್/50/2019-20/1071 ದಿನಾಂಕ 23.06.2020.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ಎಂಪಿಜಡ್/50/2019-20/7249 ದಿನಾಂಕ 23.02.2021

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಇವರು ರಾಮದುರ್ಗ ತಾಲ್ಲೂಕಿನ ಹಂಪಿಹೊಳೆ, ಅವರಾದಿ, ಮಾರಡಗಿ ಹಾಗೂ ಸುರೇಬಾನ ಗ್ರಾಮಗಳ ಸಂತ್ರಸ್ಥರು ಮಲಪ್ರಭಾ ನದಿಯ ಪ್ರವಾಹದಿಂದಾಗಿ ಭಾದಿತವಾಗಿದ್ದು, ಜನ ಜೀವನ ಅಸ್ತವ್ಯಸ್ತವಾಗಿರುತ್ತದೆ ; ದಿನಾಂಕ:10.09.2019 ರಂದು ಸನ್ಮಾನ್ಯ ಮುಖ್ಯ ಮಂತ್ರಿಗಳು, ಕರ್ನಾಟಕ ಸರ್ಕಾರ ಇವರು ಬೆಳಗಾವಿ ಜಿಲ್ಲೆಯ ನೆರೆ ಪೀಡಿತ ಪ್ರದೇಶಗಳ ಪರಿವೀಕ್ಷಣೆ ಸಮಯದಲ್ಲಿ ಮುನ್ನೆಚ್ಚರಿಕೆಯ ಕ್ರಮವಾಗಿ ನದಿಯ ದಂಡೆಯ ಮೇಲೆ ರಕ್ಷಣಾ ತಡೆಗೋಡೆಯನ್ನು ನಿರ್ಮಿಸುವಂತೆ ಸನ್ಮಾನ್ಯ ಮುಖ್ಯ ಮಂತ್ರಿಯವರಿಗೆ ಗ್ರಾಮಸ್ಥರು ಮನವಿ ಮಾಡಿದ್ದು, ಗ್ರಾಮಸ್ಥರ ಮನವಿ ಮೇರೆಗೆ ರಾಮದುರ್ಗ ತಾಲ್ಲೂಕಿನ ಹಂಪಿಹೊಳಿ ಗ್ರಾಮದಲ್ಲಿ ಮಲಪ್ರಭಾ ನದಿಗೆ ತಡೆಗೋಡೆ ನಿರ್ಮಿಸಲು ಸನ್ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿರುವದನ್ವಯ ಸದರಿ ರಕ್ಷಣಾ ತಡೆಗೋಡೆ ಸುಮಾರು 9.00 ಕಿ.ಮೀ ಉದ್ದಕ್ಕೆ ನಿರ್ಮಿಸುವ ರೇಖಾ ಅಂದಾಜನ್ನು ರೂ.126.00 ಕೋಟಿಗಳಿಗೆ ತಯಾರಿಸಿ ಅನುಮೋದನೆಗಾಗಿ ಮುಖ್ಯ ಇಂಜಿನಿಯರ್, ಕನೀನಿನಿ, ಮಲಪ್ರಭಾ ಯೋಜನಾ ವಲಯ, ಧಾರವಾಡ ರವರು ಸಲ್ಲಿಸಿರುತ್ತಾರೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಇವರು ರಾಮದುರ್ಗ ತಾಲ್ಲೂಕಿನ ಹಂಪಿಹೊಳಿ ಗ್ರಾಮದಲ್ಲಿ ಮಲಪ್ರಭಾ ನದಿಗೆ ತಡೆಗೋಡೆ ನಿರ್ಮಾಣ ಕಾಮಗಾರಿಯ ಪ್ರಸ್ತಾವನೆಯನ್ನು ದಿನಾಂಕ:24.10.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮ ನಿಯಮಿತದ ನಿರ್ದೇಶಕರ ಮಂಡಳಿಯ 91ನೇ ಸಭೆಯಲ್ಲಿ ಮಂಡಿಸಲಾಗಿದ್ದು, ಬೆಳಗಾವಿ ಜಿಲ್ಲೆಯ ನೆರೆ ಪೀಡಿತ ಪ್ರದೇಶಗಳ ಪರಿವೀಕ್ಷಣೆ ಸಮಯದಲ್ಲಿ ಮುನ್ನೆಚ್ಚರಿಕೆಯ ಕ್ರಮವಾಗಿ ಮಲಪ್ರಭಾ ನದಿಗೆ ಸುಮಾರು 9.00 ಕಿ.ಮೀ ರಕ್ಷಣಾ ತಡೆಗೋಡೆಯ ಅತ್ಯವಶ್ಯಕವಾಗಿರುವುದರಿಂದ, ಸದರಿ ಕಾಮಗಾರಿಯನ್ನು ರೂ.126.00 ಕೋಟಿಗಳಿಗೆ ಕೈಗೆತ್ತಿಕೊಳ್ಳುವ ಪ್ರಸ್ತಾವನೆಗೆ ಮಂಡಳಿಯು ಅನುಮೋದನೆ ನೀಡಿರುತ್ತದೆ ಎಂದು ತಿಳಿಸುತ್ತಾ ಮಂಡಳಿಯ ಶಿಫಾರಸ್ಸಿನಂತೆ ಮತ್ತು ಸದರಿ ಕಾಮಗಾರಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಸ್ಥಳೀಯ ಜನ ಪ್ರತಿನಿಧಿಗಳು ಒತ್ತಾಯಿಸುತ್ತಿರುವುದರಿಂದ ಹಾಗೂ ಪ್ರವಾಹದಿಂದ ಗ್ರಾಮಸ್ಥರನ್ನು ರಕ್ಷಿಸಲು ರಾಮದುರ್ಗ ತಾಲ್ಲೂಕಿನ ಹಂಪಿಹೊಳಿ ಗ್ರಾಮದಲ್ಲಿ ಮಲಪ್ರಭಾ ನದಿಗೆ ತಡೆಗೋಡೆ ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಕೈಗೊಳ್ಳಲು ರೂ.126.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಮತ್ತೊಮ್ಮೆ ಕೋರಿರುತ್ತಾರೆ.

ಮುಂದುವರೆದು, ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ಮಾನ್ಯ ಶಾಸಕರು, ರಾಮದುರ್ಗ ವಿಧಾನಸಭಾ ಕ್ಷೇತ್ರ ಇವರು ತಮ್ಮ ಪತ್ರ ದಿನಾಂಕ:19.02.2021 ರನ್ವಯ 2020ನೇ ಸಾಲಿನಲ್ಲಿ ಪುನ: ಪ್ರವಾಹ ಬಂದ ಸಂದರ್ಭದಲ್ಲಿ ಸಂಬಂಧಿಸಿದ ಗ್ರಾಮಸ್ಥರು ಹಂಪಿಹೊಳಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ನದಿಗೆ ತಡೆಗೋಡೆ ನಿರ್ಮಾಣ ಮಾಡುವಂತೆ ಒತ್ತಾಯಿಸಿದ್ದು ಸದರಿ ತಡೆಗೋಡೆ ನಿರ್ಮಾಣ ಮಾಡುವ ಕುರಿತು ಸನ್ಮಾನ್ಯ ಮುಖ್ಯ ಮಂತ್ರಿಗಳು ಸಾರ್ವಜನಿಕವಾಗಿ ಘೋಷಿಸಿರುವ ಹಿನ್ನಲೆಯಲ್ಲಿ ಈ ವರ್ಷ ವಾಡಿಕೆಯಂತೆ ಜೂನ್/ಜುಲೈನಲ್ಲಿ ಮಳೆಗಾಲ ಪ್ರಾರಂಭವಾಗುವ ನಿರೀಕ್ಷೆಯಿದ್ದು, ಮಳೆಗಾಲ ಪ್ರಾರಂಭವಾಗುವುದಕ್ಕೂ ಮುನ್ನ ತಡೆಗೋಡೆ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಬೇಕೆಂದು ಕೋರಿದ್ದು ಸದರಿ ಕಾಮಗಾರಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಸ್ಥಳೀಯ ಜನಪ್ರತಿನಿಧಿಗಳು ಒತ್ತಾಯಿಸುತ್ತಿರುವುದರಿಂದ ಹಾಗೂ ಪ್ರವಾಹದಿಂದ ಗ್ರಾಮಸ್ಥರನ್ನು ರಕ್ಷಿಸಲು ರಾಮದುರ್ಗ ತಾಲ್ಲೂಕಿನ ಹಂಪಿಹೊಳಿ ಗ್ರಾಮದಲ್ಲಿ ಮಲಪ್ರಭಾ ನದಿಗೆ ತಡೆಗೋಡೆ ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಕೈಗೊಳ್ಳಲು ರೂ. 126.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ ಹಾಗೂ ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 21 ಎಂಪಿಜಡ್ 2019, ದಿನಾಂಕ:16.06.2021**

ಬೆಳಗಾವಿ ಜಿಲ್ಲೆ, ರಾಮದುರ್ಗ ತಾಲ್ಲೂಕಿನ ಹಂಪಿಹೊಳಿ ಗ್ರಾಮದಲ್ಲಿ ಮಲಪ್ರಭಾ ನದಿಗೆ ತಡೆಗೋಡೆ ನಿರ್ಮಾಣ ಕಾಮಗಾರಿಯ ರೂ.126.00 ಕೋಟಿಗಳ ಮೊತ್ತದ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 16 ಆಕೋ-1/2020 (ಇ-ಆಫೀಸ್) ದಿನಾಂಕ:16.06.2021 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್ 05 ಎಂಸಿಎಂ 2020-ಪಿಪಿಡಿ ದಿನಾಂಕ:03.02.2020 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

16/6/2021
**(ರವೀಂದ್ರ ಕೊಂಡ)**
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

**<u>ಪ್ರತಿಯನ್ನು:</u>**

1. ಮಹಾಲೇಖಪಾಲರು (ಎ&ಇ) / (ಇ&ಆರ್.ಎಸ್.ಎ) / (ಜಿ&ಎಸ್.ಎಸ್.ಎ) ಕರ್ನಾಟಕ ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜ.ಸಂ.ಇಲಾಖೆ
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ
7. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
9. ಮುಖ್ಯ ಇಂಜಿನಿಯರ್, ಕನೀನಿನಿ, ಮಲಪ್ರಭಾ ಯೋಜನಾ ವಲಯ, ಧಾರವಾಡ
10. ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು, (ಲೋಇ-ಆಕೋ) ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನಸೌಧ, ಬೆಂಗಳೂರು
12. ಸರ್ಕಾರದ ಉಪ ಕಾರ್ಯದರ್ಶಿ (ಕೃಭಾಜನಿ), ಜಲ ಸಂಪನ್ಮೂಲ ಇಲಾಖೆ
13. ತಾಂತ್ರಿಕ ಸಹಾಯಕರು-6, ಜಲ ಸಂಪನ್ಮೂಲ ಇಲಾಖೆ
14. ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.